**All India Radio: Bangalore**
**National Bulletin In Kannada**
**15.06.2026  13.10 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**<>><><*><><<>**

ಮುಖ್ಯಾಂಶಗಳು

**೧. ಇದೇ ೧೯ರಂದು ಸ್ವಿಟ್ಜರ್ಲೆಂಡ್‌ನಲ್ಲಿ ಅಮೆರಿಕ-ಇರಾನ್ ನಡುವೆ ಶಾಂತಿ ಒಪ್ಪಂದ ; ಹಾರ್ಮುಜ್ ಜಲಸಂಧಿ ಶೀಘ್ರ ಸಂಚಾರಕ್ಕೆ ಮುಕ್ತ**

**೨. ಸ್ಲೋವಾಕಿಯಾ ಪ್ರಧಾನಿಯೊಂದಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ಮಾತುಕತೆ**

**೩. ದೇಶದಲ್ಲಿ ರಸಗೊಬ್ಬರಗಳ ಕೊರತೆ ಇಲ್ಲ - ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಸ್ಪಷ್ಟನೆ**

**೪. ಫಿಫಾ ವಿಶ್ವಕಪ್ ಫುಟ್ಬಾಲ್ ; ’ಎಚ್’ ಗುಂಪಿನ ಪಂದ್ಯದಲ್ಲಿಂದು ಸ್ಪೇನ್-ಕ್ಯಾಬೊ ವರ್ಡೆ ತಂಡಗಳು ಮುಖಾಮುಖಿ**

**<>><><*><><<>**

ಅಮೆರಿಕ ಮತ್ತು ಇರಾನ್ ತಮ್ಮ ೧೦೭ ದಿನಗಳ ಯುದ್ಧವನ್ನು ಕೊನೆಗೊಳಿಸಲು ಮತ್ತು ಜಾಗತಿಕ ತೈಲ ಪೂರೈಕೆಯ ಐದನೇ ಒಂದು ಭಾಗವನ್ನು ಸಾಗಿಸಲು ಬಳಸಲಾಗುತ್ತಿದ್ದ ಕಿರಿದಾದ ಜಲಮಾರ್ಗವಾದ ಹಾರ್ಮುಜ್ ಜಲಸಂಧಿಯನ್ನು ತೆರೆಯಲು ಒಪ್ಪಂದವನ್ನು ಅಂತಿಮಗೊಳಿಸಿವೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಈ ಕುರಿತು ಘೋಷಣೆ ಮಾಡಿದ್ದು, ಇರಾನಿನ ಬಂದರುಗಳ ಮೇಲಿನ ನೌಕಾ ದಿಗ್ಬಂಧನವನ್ನು ಅಮೆರಿಕ ಕೊನೆಗೊಳಿಸಲಿದೆ ಎಂದು ಹೇಳಿದ್ದಾರೆ. ಜೂನ್ ೧೯ ರಂದು ಸ್ವಿಟ್ಜರ್ಲೆಂಡ್‌ನಲ್ಲಿ ಶಾಂತಿ ಒಪ್ಪಂದಕ್ಕೆ ಸಹಿ ಹಾಕಲಾಗುವುದು. ಒಪ್ಪಂದಕ್ಕೆ ಅಧಿಕೃತವಾಗಿ ಸಹಿ ಹಾಕಿದ ನಂತರ ಶುಕ್ರವಾರ ಹಾರ್ಮುಜ್ ಜಲಸಂಧಿ ತೆರೆಯಲಾಗುವುದು. ಈ ಒಪ್ಪಂದವು ಇಡೀ ಪ್ರದೇಶಕ್ಕೆ ಶಾಂತಿ ಮತ್ತು ಭದ್ರತೆಯನ್ನು ತರುತ್ತದೆ ಎಂದು ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಲೆಬನಾನ್ ಸೇರಿದಂತೆ ಎಲ್ಲಾ ಸಂಘಟನೆಗಳು ಮತ್ತು ಪ್ರದೇಶಗಳಲ್ಲಿ ಯುದ್ಧ ಮತ್ತು ಮಿಲಿಟರಿ ಕಾರ್ಯಾಚರಣೆಗಳು ಇಂದು ರಾತ್ರಿಯಿಂದ ಶಾಶ್ವತವಾಗಿ ಕೊನೆಗೊಳ್ಳುತ್ತವೆ ಎಂದು ಇರಾನ್‌ನ ಉನ್ನತ ರಾಷ್ಟ್ರೀಯ ಭದ್ರತಾ ಮಂಡಳಿ ಹೇಳಿದೆ. ಈ ಸುದ್ದಿಯ ಬೆನ್ನಲ್ಲೇ ತೈಲ ಬೆಲೆಗಳು ಕುಸಿದಿವೆ. ಬ್ರೆಂಟ್ ಕಚ್ಚಾ ತೈಲ ಇಂದು ಆರಂಭಿಕ ವಹಿವಾಟಿನಲ್ಲಿ ಶೇಕಡಾ ೪ ರಷ್ಟು ಕುಸಿದರೆ, ಯುಎಸ್

ವೆಸ್ಟ್ ಟೆಕ್ಸಾಸ್ ಇಂಟರ್ಮೀಡಿಯೇಟ್ ಶೇಕಡಾ ೪.೬ ಕ್ಕಿಂತ ಹೆಚ್ಚು ಕುಸಿದಿದೆ. ಏಷ್ಯಾದಲ್ಲಿ ಷೇರು ಮಾರುಕಟ್ಟೆಗಳು ಜಿಗಿದಿವೆ. ಅಮೆರಿಕ ಮತ್ತು ಇರಾನ್ ಶಾಂತಿ ಒಪ್ಪಂದಕ್ಕೆ ಒಪ್ಪಿಕೊಂಡಿರುವ ವಿಚಾರವನ್ನು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಸ್ವಾಗತಿಸಿದ್ದಾರೆ. ಇದು ತಕ್ಷಣದ ಮತ್ತು ಶಾಶ್ವತ ಕದನ ವಿರಾಮ, ಹಾರ್ಮುಜ್ ಜಲಸಂಧಿಯನ್ನು ಪುನಃ ತೆರೆಯುವುದು ಮತ್ತು ಮುಂದಿನ ಮಾತುಕತೆಗಳಿಗೆ ಅನುವು ಮಾಡಿಕೊಡುತ್ತದೆ ಎಂದು ಅವರು ಹೇಳಿದ್ದಾರೆ.

<>><><*><><<>

ಅಮೆರಿಕ-ಇರಾನ್ ಅಂತಿಮ ಶಾಂತಿ ಒಪ್ಪಂದದ ಘೋಷಣೆ ಬೆನ್ನಲ್ಲೇ ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಆರಂಭಿಕ ವಹಿವಾಟಿನಲ್ಲಿ ಷೇರು ಸಂವೇದಿ ಸೂಚ್ಯಂಕ - ಸೆನ್ಸೆಕ್ಸ್ ೧ ಸಾವಿರದ ೧೧೩ ಅಂಕಗಳ ಏರಿಕೆಯೊಂದಿಗೆ ೭೬ ಸಾವಿರದ ೬೪೯ ರಲ್ಲಿ ವಹಿವಾಟು ನಡೆಸಿದೆ. ಅಂತೆಯೇ ರಾಷ್ಟ್ರೀಯ ಸಂವೇದಿ ಸೂಚ್ಯಂಕ - ನಿಫ್ಟಿ ಕೂಡ ೩೩೬ ಅಂಕ ಏರಿಕೆಯ ನಂತರ ೨೩ ಸಾವಿರದ ೯೫೬ ರಲ್ಲಿ ಆರಂಭಿಕ ವಹಿವಾಟು ನಡೆಸಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿ ಪ್ರತಿ ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೫೮ ಪೈಸೆ ಏರಿಕೆಯೊಂದಿಗೆ ೯೪ ರೂಪಾಯಿ ೬೦ ಪೈಸೆಯಷ್ಟಿದೆ.

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಸ್ಲೋವಾಕಿಯಾದ ರಾಜಧಾನಿ ಬ್ರಾಟಿಸ್ಲಾವಾದಲ್ಲಿ ಸ್ಲೋವಾಕಿಯಾ ಪ್ರಧಾನಿ ರಾಬರ್ಟ್ ಫಿಕೊ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಸ್ಲೋವಾಕಿಯಾ ಅಧ್ಯಕ್ಷ ಪೀಟರ್ ಪೆಲ್ಲೆಗ್ರಿನಿ ಅವರನ್ನು ಸಹ ಭೇಟಿ ಮಾಡಲಿದ್ದಾರೆ. ಈ ಭೇಟಿಯು ಭಾರತ-ಸ್ಲೋವಾಕಿಯಾ ಸಂಬಂಧಗಳನ್ನು ಗಾಢವಾಗಿಸಲು ಮತ್ತು ಎರಡೂ ದೇಶಗಳ ನಡುವಿನ ಸಹಕಾರದ ಹೊಸ ಮಾರ್ಗಗಳನ್ನು ಅನ್ವೇಷಿಸಲು ಅವಕಾಶವನ್ನು ಒದಗಿಸುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸ್ಲೋವಾಕಿಯಾ ಅಧ್ಯಕ್ಷ ಪೀಟರ್ ಪೆಲ್ಲೆಗ್ರಿನಿ ಮತ್ತು ಪ್ರಧಾನಿ ರಾಬರ್ಟ್ ಫಿಕೊ ಅವರೊಂದಿಗೆ ಉತ್ಪಾದಕ ಸಭೆಗಳನ್ನು ಎದುರು ನೋಡುತ್ತಿರುವುದಾಗಿ ಅವರು ತಿಳಿಸಿದ್ದಾರೆ. ೧೯೯೩ರಲ್ಲಿ ಸ್ಲೋವಾಕಿಯಾ ಸ್ವಾತಂತ್ರ್ಯ ಪಡೆದ ನಂತರ ಭಾರತದ ಪ್ರಧಾನಿಯೊಬ್ಬರು ಭೇಟಿ ನೀಡುತ್ತಿರುವುದು ಇದೇ ಮೊದಲು. ವ್ಯಾಪಾರ, ಹೂಡಿಕೆ, ಆಟೋಮೊಬೈಲ್ ಮತ್ತು ರೈಲ್ವೆ ಉತ್ಪಾದನೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸ್ಲೋವಾಕಿಯಾದೊಂದಿಗೆ ದ್ವಿಪಕ್ಷೀಯ ಸಂಬಂಧವನ್ನು ಬಲಪಡಿಸುವ ಕಡೆಗೆ ಭಾರತದ ಬದ್ಧತೆಯನ್ನು ಈ ಭೇಟಿ ಪುನರುಚ್ಚರಿಸುತ್ತದೆ.

<>><><*><><<>

೫೨ ನೇ ಜಿ-೭ ಶೃಂಗಸಭೆ ಇಂದು ಫ್ರಾನ್ಸ್‌ನ ಎವಿಯನ್‌ನಲ್ಲಿ ಆರಂಭವಾಗಲಿದೆ. ಮೂರು ದಿನಗಳ ಈ ಶೃಂಗಸಭೆಯಲ್ಲಿ ಜಿ-೭ ಸದಸ್ಯ ರಾಷ್ಟ್ರಗಳಾದ - ಕೆನಡಾ, ಫ್ರಾನ್ಸ್, ಜರ್ಮನಿ, ಇಟಲಿ, ಜಪಾನ್, ಯುಕೆ, ಅಮೆರಿಕ ಮತ್ತು ಐರೋಪ್ಯ ಒಕ್ಕೂಟ ಭಾಗವಹಿಸುತ್ತಿವೆ. ಸದಸ್ಯರ ಜೊತೆಗೆ, ಭಾರತ, ಬ್ರೆಜಿಲ್, ಈಜಿಪ್ಟ್, ಕೀನ್ಯಾ, ದಕ್ಷಿಣ ಕೊರಿಯಾ, ಕತಾರ್, ಸೌದಿ ಅರೇಬಿಯಾ, ಸಿರಿಯಾ, ಯುಎಇ ಮತ್ತು ಉಕ್ರೇನ್ ಅನ್ನು 'ಔಟ್ರೀಚ್ ಪಾಲುದಾರ ರಾಷ್ಟ್ರಗಳು' ಎಂದು ಫ್ರಾನ್ಸ್ ಆಹ್ವಾನಿಸಿದೆ. ಭಾರತ 'ಪಾಲುದಾರ ರಾಷ್ಟ್ರ'ವಾಗಿ ಜಿ-೭ ಶೃಂಗಸಭೆಯಲ್ಲಿ ಭಾಗವಹಿಸುತ್ತಿರುವುದು ಇದು ೧೩ ನೇ ಬಾರಿ. ಪ್ರಧಾನಿ ನರೇಂದ್ರ ಮೋದಿ ನಾಳೆ ಔಟ್ರೀಚ್ ಅಧಿವೇಶನಗಳಲ್ಲಿ ಭಾಗವಹಿಸಲಿದ್ದಾರೆ. ಜಿ-೭ ಶೃಂಗಸಭೆಯಲ್ಲಿ ಪ್ರಧಾನಿ ಮೋದಿ ಭಾಗವಹಿಸುವುದು ಜಾಗತಿಕ ಭೌಗೋಳಿಕ ರಾಜಕೀಯದಲ್ಲಿ ಭಾರತದ ಪ್ರಮುಖ ಪಾತ್ರವನ್ನು ಒತ್ತಿಹೇಳುತ್ತದೆ. ಭಾರತ ಪ್ರಮುಖ ಆರ್ಥಿಕ ಶಕ್ತಿ ಕೇಂದ್ರವಾಗಿ, ಅಭಿವೃದ್ಧಿಶೀಲ ರಾಷ್ಟ್ರಗಳಿಗೆ ರಾಜತಾಂತ್ರಿಕ ಸೇತುವೆಯಾಗಿ ಮತ್ತು ಇಂಡೋ-ಪೆಸಿಫಿಕ್‌ನಲ್ಲಿ ಕಾರ್ಯತಂತ್ರದ ಆಧಾರವಾಗಿ ಜಿ-೭ ಒಕ್ಕೂಟಕ್ಕೆ ಮುಖ್ಯವಾಗಿದೆ.

<>><><*><><<>

ದೇಶದಲ್ಲಿ ಸಾಕಷ್ಟು ಆಹಾರ ಧಾನ್ಯಗಳ ಸಂಗ್ರಹವಿದೆ. ಎಲ್ ನಿನೊ ಪರಿಸ್ಥಿತಿಗಳ ಪ್ರಭಾವದ ಹೊರತಾಗಿಯೂ ಯಾವುದೇ ಆಹಾರ ಕೊರತೆ ಇರುವುದಿಲ್ಲ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ಮೈಂಡ್‌ಮೈನ್ ಶೃಂಗಸಭೆ ಉದ್ದೇಶಿಸಿ ಮಾತನಾಡಿದ ಅವರು, ಈ ವರ್ಷ ನೈಋತ್ಯ ಮುಂಗಾರು ಮಳೆ ಸಾಮಾನ್ಯಕ್ಕಿಂತ ಕಡಿಮೆ ಇರಲಿದೆ ಎಂದು ನಿರೀಕ್ಷಿಸಲಾಗಿದೆ. ಮುಂಗಾರು ಮಳೆ ಋತುವಿಗೆ ಸಾಕಷ್ಟು ಪ್ರಮಾಣದ ರಸಗೊಬ್ಬರಗಳು ಲಭ್ಯವಿದೆ ಎಂದು ತಿಳಿಸಿದರು.

ಮುಂಬರುವ ಹಿಂಗಾರು ಋತುವಿಗೆ ರಸಗೊಬ್ಬರಗಳ ಪೂರೈಕೆ ಈ ವರ್ಷದ ನವೆಂಬರ್‌ನಿಂದ ಪ್ರಾರಂಭವಾಗಲಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಮಾಹಿತಿ ನೀಡಿದರು.

<>><><*><><<>

ಕಳೆದ ೧೨ ವರ್ಷಗಳಲ್ಲಿ ಭಾರತದ ಮಧ್ಯಮ ವರ್ಗವನ್ನು ಆರ್ಥಿಕ ಭದ್ರತೆ, ಉತ್ತಮ ಸೌಲಭ್ಯ ಮತ್ತು ಹೊಸ ಅವಕಾಶಗಳೊಂದಿಗೆ ಸಬಲೀಕರಣಗೊಳಿಸಲು ಸರ್ಕಾರ ಸಮಗ್ರ ಬದಲಾವಣೆಗಳನ್ನು ಮಾಡಿದೆ ಎಂದು ಬಿಜೆಪಿ ಅಧ್ಯಕ್ಷ ನಿತಿನ್ ನಬಿನ್ ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಆದಾಯ ತೆರಿಗೆ ಸುಧಾರಣೆಗಳ ಮೂಲಕ ತೆರಿಗೆ ವಿನಾಯಿತಿ ಮತ್ತು

ಜಿಎಸ್‌ಟಿ ಮೂಲಕ ತೆರಿಗೆ ವ್ಯವಸ್ಥೆಯಲ್ಲಿ ಪಾರದರ್ಶಕತೆ ಸೇರಿದಂತೆ ಸರ್ಕಾರ ಕೈಗೊಂಡ ಹಲವಾರು ನೀತಿಗಳು ಇದಕ್ಕೆ ಸಾಕ್ಷಿಯಾಗಿದೆ ಎಂದರು. ಉಜ್ವಲ ಯೋಜನೆ, ಜಲಜೀವನ್ ಮಿಷನ್, ಸ್ವಚ್ಛ ಭಾರತ್‌ನಂತಹ ಉಪಕ್ರಮಗಳು ನಾಗರಿಕರಿಗೆ ಮೂಲಭೂತ ಜೀವನ ಸೌಲಭ್ಯಗಳನ್ನು ಪ್ರವೇಶಿಸುವಂತೆ ಮಾಡಿವೆ. ಪ್ರಧಾನಮಂತ್ರಿ ಆವಾಸ್ ಯೋಜನೆಯಂತಹ ಯೋಜನೆಗಳು ಹಾಗೂ ಆಯುಷ್ಮಾನ್ ಭಾರತ್ ಯೋಜನೆಯು ಕ್ರಮವಾಗಿ ಮನೆ ಮತ್ತು ಆರೋಗ್ಯ ಭದ್ರತೆಯನ್ನು ಹೊಂದುವ ಜನರ ಕನಸನ್ನು ನನಸಾಗಿಸಲು ಅವಕಾಶ ಮಾಡಿಕೊಟ್ಟಿವೆ ಎಂದು ಅವರು ಹೇಳಿದರು. ಇಂತಹ ಉಪಕ್ರಮಗಳ ಮೂಲಕ ಕೇಂದ್ರ ಸರ್ಕಾರ ಮಧ್ಯಮ ವರ್ಗದ ಜನರನ್ನು ಸಬಲೀಕರಣಗೊಳಿಸಿದೆ. ಇದು ಭಾರತದ ಆರ್ಥಿಕತೆಯಲ್ಲಿ ಪ್ರಮುಖ ಶಕ್ತಿಯಾಗಿದೆ. ಆತ್ಮನಿರ್ಭರ ಭಾರತ ಮತ್ತು ವಿಕಸಿತ ಭಾರತಕ್ಕಾಗಿ ಸಂಕಲ್ಪವನ್ನು ವೇಗಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ನಿತಿನ್ ನಬಿನ್ ಅಭಿಪ್ರಾಯಪಟ್ಟರು. ಇದೇ ವೇಳೆ, ಕಳೆದ ೧೨ ವರ್ಷಗಳಲ್ಲಿ ಭಾರತದ ಸಮಗ್ರ ಅಭಿವೃದ್ಧಿಗಾಗಿ ಎನ್‌ಡಿಎ ಸರ್ಕಾರ ಕೈಗೊಂಡ ಕ್ರಮಗಳ ಕುರಿತು ವಿಶೇಷ ವರದಿ ಇದೀಗ ಮೂಡಿಬರಲಿದೆ.

**ಧ್ವನಿ : ಸೌಮ್ಯ ಹೆಚ್.ಪಿ. (   ಸೆಕೆಂಡ್‌ಗಳು)**

**<>><><*><><<>**

ಕಳೆದ ೧೨ ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವದಲ್ಲಿ 'ಸಬ್ ಕಾ ಸಾತ್, ಸಬ್ ಕಾ ವಿಕಾಸ್, ಸಬ್ ಕಾ ವಿಶ್ವಾಸ್ ಮತ್ತು ಸಬ್ ಕಾ ಪ್ರಯಾಸ್' ತತ್ವಗಳಿಂದ ಭಾರತ ಗಮನಾರ್ಹ ಪರಿವರ್ತನೆಗೆ ಒಳಗಾಗಿದೆ. ಈ ಅವಧಿಯಲ್ಲಿ ಎನ್‌ಡಿಎ ಸರ್ಕಾರ ಬಡವರು, ರೈತರು, ಮಹಿಳೆಯರು ಮತ್ತು ಯುವಕರ ಕಲ್ಯಾಣ ಹಾಗೂ ಸಬಲೀಕರಣಕ್ಕಾಗಿ ಅನೇಕ ಪ್ರಮುಖ ಉಪಕ್ರಮಗಳನ್ನು ಕೈಗೊಂಡಿದೆ. ವಿಶ್ವದರ್ಜೆಯ ಮೂಲಸೌಕರ್ಯದ ಅಡಿಪಾಯದ ಮೇಲೆ ಬಲವಾದ ಮತ್ತು ಆಧುನಿಕ ರಾಷ್ಟ್ರವನ್ನು ನಿರ್ಮಿಸಲಾಗಿದೆ. ಮೂಲಸೌಕರ್ಯಕ್ಕಾಗಿ ಸರ್ಕಾರಿ ವೆಚ್ಚದಲ್ಲಿ ೬ ಪಟ್ಟು ಹೆಚ್ಚಳವಾಗಿದೆ. ೨೦೧೪-೧೫ರಲ್ಲಿ ೨ ಲಕ್ಷ ಕೋಟಿ ರೂಪಾಯಿಗಳಿಂದ ಪ್ರಸ್ತುತ ಹಣಕಾಸು ವರ್ಷದಲ್ಲಿ ೧೨.೨ ಲಕ್ಷ ಕೋಟಿ ರೂಪಾಯಿಗಳಿಗೆ ಏರಿಕೆಯಾಗಿದೆ. ಕಳೆದ ೧೨ ವರ್ಷಗಳಲ್ಲಿ ದೇಶದ ನಗರ ಸಾರಿಗೆಯಲ್ಲಿ ಕ್ರಾಂತಿಕಾರಕ ಬದಲಾವಣೆಯಾಗಿದೆ. ಭಾರತದ ಮೆಟ್ರೋ ರೈಲು ಜಾಲ ಸುಮಾರು ೫ ಪಟ್ಟು ವಿಸ್ತರಿಸಿದೆ. ಇದೇ ವೇಳೆ ಭಾರತ ಇಂದು ವಿಶ್ವದ ೨ನೇ ಅತಿದೊಡ್ಡ ರಸ್ತೆ ಜಾಲವನ್ನು ಹೊಂದಿದೆ. ೨೦೧೪ರಲ್ಲಿ ೯೧ ಸಾವಿರ ಕಿಲೋಮೀಟರ್ ಇದ್ದ ರಾಷ್ಟ್ರೀಯ ಹೆದ್ದಾರಿ ಜಾಲ ೨೦೨೬ರಲ್ಲಿ ೧ ಲಕ್ಷ ೪೬ ಸಾವಿರ ಕಿಲೋಮೀಟರ್‌ಗಳಿಗೆ ವಿಸ್ತರಿಸಿದೆ. ಭಾರತೀಯ ರೈಲ್ವೆಗೆ ಬಜೆಟ್ ಅನುದಾನ ೯ ಪಟ್ಟು ಹೆಚ್ಚಾಗಿದೆ. ೨೦೧೪-೧೫ರಲ್ಲಿ ೩೨ ಸಾವಿರ ಕೋಟಿ ರೂಪಾಯಿಗಳಿಂದ ಪ್ರಸ್ತುತ ೨.೭೮ ಲಕ್ಷ ಕೋಟಿ ರೂಪಾಯಿಗಳಿಗೆ ಅನುದಾನ

ಏರಿಕೆಯಾಗಿದೆ. ಈ ಹೂಡಿಕೆಯು ಭಾರತೀಯ ರೈಲ್ವೆಯ ಆಧುನೀಕರಣಕ್ಕೆ ಶಕ್ತಿ ತುಂಬಿದೆ ಮತ್ತು ಪ್ರಯಾಣಿಕರ ಅನುಭವವನ್ನು ಸುಧಾರಿಸಿದೆ. ಪ್ರಸ್ತುತ ೧೬೨ ವಂದೇ ಭಾರತ ರೈಲುಗಳು ಕಾರ್ಯ ನಿರ್ವಹಿಸುತ್ತಿದ್ದು, ಇದು ಪ್ರಯಾಣದ ಸಮಯವನ್ನು ಶೇಕಡ ೪೫ರಷ್ಟು ಕಡಿಮೆ ಮಾಡಿದೆ. ಒಟ್ಟಾರೆ ಈ ಸಾಧನೆಗಳು ೨೦೪೭ರ ವೇಳೆಗೆ ವಿಕಸಿತ ಭಾರತಕ್ಕೆ ಅಡಿಪಾಯ ಹಾಕುವ ಮೂಲಕ ವೇಗವಾದ, ಹೆಚ್ಚು ಸಂಪರ್ಕಿತ ಮತ್ತು ಹೆಚ್ಚು ಸಮೃದ್ಧ ಭಾರತವನ್ನು ನಿರ್ಮಿಸುತ್ತಿದೆ.

**<>><><*><><<>**

ಫಿಲಡೆಲ್ಫಿಯಾದಲ್ಲಿ ಇಂದು ನಡೆದ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ 'ಇ' ಗುಂಪಿನ ಪಂದ್ಯದಲ್ಲಿ, ಐವರಿ ಕೋಸ್ಟ್ ತಂಡ, ಈಕ್ವೆಡಾರ್ ವಿರುದ್ಧ ೧-೦ ಗೋಲುಗಳಿಂದ ಜಯಗಳಿಸಿತು. ಇದೇ ವೇಳೆ ಅಮೆರಿಕದ ಅಟ್ಲಾಂಟಾ ಕ್ರೀಡಾಂಗಣದಲ್ಲಿ ನಡೆಯುವ 'ಎಚ್' ಗುಂಪಿನ ಪಂದ್ಯದಲ್ಲಿ ಸ್ಪೇನ್ ತಂಡ, ಕ್ಯಾಬೊ ವರ್ಡೆ ವಿರುದ್ಧ ಸೆಣಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೯.೩೦ ಕ್ಕೆ ಆರಂಭವಾಗಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ <>*><>**